ಏ) ಸಾಗುವಳಿ ವೆಚ್ಚ ಕಡಿಮೆ ಮಾಡಲು ಸಾವಯವ ಕೃಷಿ ಮತ್ತು ಜೀವಾಣು ಗೊಬ್ಬರ ಪ್ರೋತ್ಸಾಹ

ಐ) ಮಣ್ಣು ಪರೀಕ್ಷೆಯ ಆಧಾರದ ಮೇಲೆ ಮಣ್ಣಿನ ಫಲವತ್ತತೆ ಹೆಚ್ಚಿಸಲು ಕ್ರಮ

ರೈತರ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗಿರುವಂತಹ 6 ಜಿಲ್ಲೆಗಳಾದ ಶಿವಮೊಗ್ಗ, ಚಿತ್ರದುರ್ಗ, ಬೆಳಗಾಂ, ಹಾಸನ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಗಳಿಗೆ ಭಾರತ ಸರ್ಕಾರದ ವಿಶೇಷ ಪ್ಯಾಕೇಜ್

711 (1211) ಶ್ರೀ ಧ್ರುವನಾರಾಯಣ್ ಆರ್ (ಸಂತೇಮರಳ್ಳಿ) – ಸಹಕಾರ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ –

ಅ) ಸಹಕಾರ ಇಲಾಖೆಯಲ್ಲಿ ನೋಂದಾಯಿಸಲ್ಪಟ್ಟ ಬೆಂಗಳೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ ಎಷ್ಟು ?

ಆ) ಸದಸ್ಯರಿಂದ ಹಣ ಸಂಗ್ರಹಿಸಿ ನಿವೇಶನ ಹಂಚದಿರುವ ಗೃಹ ನಿರ್ಮಾಣ ಸಹಕಾರ ಸಂಘಗಳೆಷ್ಟು ?

ಇ) ಈ ಅನಾನುಕೂಲತೆಗಳನ್ನು ತಪ್ಪಿಸಲು ಸರ್ಕಾರದ ಕ್ರಮವೇನು ?

ಶ್ರೀ ಜಿ ಟಿ ದೇವೇಗೌಡ (ಸಹಕಾರ ಸಚಿವರು) –

ಅ) ಬೆಂಗಳೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಗೃಹ ನಿರ್ಮಾಣ ಸಹಕಾರ ಸಂಘಗಳ ಸಂಖ್ಯೆ 195

ಆ) 49 ಗೃಹ ನಿರ್ಮಾಣ ಸಹಕಾರ ಸಂಘಗಳು ಸದಸ್ಯರಿಂದ ಹಣ ಸಂಗ್ರಹಿಸಿ ನಿವೇಶನ ಹಂಚಿರುವುದಿಲ್ಲ

ಇ) ಈ ಬಗ್ಗೆ ಸಂಬಂಧಪಟ್ಟ ಸಹಕಾರ ಸಂಘಗಳು ಸದಸ್ಯರಿಗೆ ನಿವೇಶನ ನೀಡಲು ಕ್ರಮವಿಡಬೇಕಾಗಿದೆ ಸಹಕಾರ ಸಂಘಗಳು ನಿವೇಶನ ಹಂಚಿಕೆಗಾಗಿ ಅಗತ್ಯವಿರುವ ಭೂಮಿಯನ್ನು ಪಡೆಯಲು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವನ್ನು ಸಂಪರ್ಕಿಸಬಹುದಾಗಿದೆ

713 (719) ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) :– ಸಹಕಾರ ಸಚಿವರು ದಯಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ –

ಅ) ಸರ್ಕಾರದ ಅವೈಜ್ಞಾನಿಕ ಸಾಲ ಮನ್ನಾ ಯೋಜನೆಯಿಂದ ಜಿಲ್ಲಾ ಮಟ್ಟದ ಸಹಕಾರ ಬ್ಯಾಂಕುಗಳು ದಿವಾಳಿ ಅಂಚಿಗೆ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ರಾಜ್ಯ ಸರ್ಕಾರವು ರೈತರ ಯಾವ ಯಾವ ಸಾಲವನ್ನು ಮನ್ನಾ ಮಾಡಿದೆ? ಇವುಗಳ ಒಟ್ಟು ಮೊತ್ತ ಎಷ್ಟು ?